ಆರ್ಯುವೇದ ಮತ್ತು ಯುನಾನಿ ವೈದ್ಯ ಮಂಡಳಿ ಇವರಿಗೆ ಅಧಿಕಾರ ನೀಡಲಾಗಿದೆ. ಈ ಬಗ್ಗೆ ಈಗಿರುವ ಕಾನೂನು ಸ್ವಲ್ಪ ಮಟ್ಟಿಗೆ ಪರಿಣಾಮಕಾರಿಯಾಗಿರುತ್ತದೆ.

**ಕುಡಿಯುವ ನೀರಿನ ಗುಣಮಟ್ಟ ಮತ್ತು ನೀರಿನ ಪೂರೈಕೆಗಾಗಿ ತಾಂತ್ರಿಕ ಆಯೋಗ ನೇಮಕ**

2874 - ಶ್ರೀ ಆತ್ಮಾನಂದ ಎಂ.ಎಸ್. (ಮಂಡ್ಯ) : ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) *ರಾಜ್ಯದ ಗ್ರಾಮಾಂತರ ಪ್ರದೇಶಗಳಲ್ಲಿ ಕುಡಿಯುವ ನೀರಿನ ಪೂರೈಕೆ ಹಾಗೂ ನೀರಿನ ಗುಣಮಟ್ಟ ಮತ್ತು ನೈರ್ಮಲ್ಯದ ಸಮೀಕ್ಷೆಗಾಗಿ ಸರ್ಕಾರ ತಾಂತ್ರಿಕ ಆಯೋಗವನ್ನು ನೇಮಿಸಿದೆಯೇ?*

ಆ) *ಹಾಗಿದ್ದಲ್ಲಿ ತಾಂತ್ರಿಕ ಆಯೋಗ ಸಮೀಕ್ಷೆ ವರದಿಯನ್ನು ಸರ್ಕಾರಕ್ಕೆ ಸಲ್ಲಿಸಿದೆಯೇ?*

ಶ್ರೀ ಎಂ.ವೈ. ಘೋರ್ಪಡೆ (ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು) :

ಅ) ಕರ್ನಾಟಕ ನೀರು ಸರಬರಾಜು ಮತ್ತು ನೈರ್ಮಲ್ಯ ನಿಯೋಗವನ್ನು ಸರ್ಕಾರಕ್ಕೆ ಸಲಹೆ ನೀಡುವ ಸಲುವಾಗಿ ರಚಿಸಲಾಗಿದೆ. ನೀರಿನ ಗುಣಮಟ್ಟದ ಸಮೀಕ್ಷೆಯನ್ನು ತಜ್ಞ ಸಂಸ್ಥೆಗಳ ಮೂಲಕ ನಡೆಸಲಾಗುತ್ತಿದೆ.

ಆ) ವರದಿಯನ್ನು ನಿರೀಕ್ಷಿಸಲಾಗಿದೆ.

**ಮಂಡ್ಯ ವಿಶ್ವೇಶ್ವರಯ್ಯ ಸ್ನಾತಕೋತ್ತರ ಕೇಂದ್ರದ ಅಭಿವೃದ್ಧಿ**

2875 - ಶ್ರೀ ಆತ್ಮಾನಂದ ಎಂ.ಎಸ್ (ಮಂಡ್ಯ) : ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) *ಮಂಡ್ಯ ತಾಲ್ಲೂಕಿನ ತೂಬಿನಕೆರೆ ಬಳಿಯಲ್ಲಿ ಇರುವ ವಿಶ್ವೇಶ್ವರಯ್ಯ ಸ್ನಾತಕೋತ್ತರ ಕೇಂದ್ರವನ್ನು ಯಾವಾಗ ಪ್ರಾರಂಭಿಸಲಾಯಿತು?*

ಆ) *ವಿಶ್ವೇಶ್ವರಯ್ಯ ಸ್ನಾತಕೋತ್ತರ ಕೇಂದ್ರದ ಸಮಗ್ರ ಅಭಿವೃದ್ಧಿಗೆ ಸರ್ಕಾರದವರು ಕಾರ್ಯಕ್ರಮಗಳನ್ನು ರೂಪಿಸಿ ಕೈಗೊಂಡಿರುವ ಕ್ರಮಗಳೇನು?*

ಡಾ॥ ಜಿ. ಪರಮೇಶ್ವರ್ (ಉನ್ನತ ಶಿಕ್ಷಣ ಸಚಿವರು) :

ಅ) ಮಂಡ್ಯ ಜಿಲ್ಲೆಯ ಕೊಮ್ಮೇರನಹಳ್ಳಿ ಬಳಿ ದಿನಾಂಕ : 13-07-1992 ರಂದು ಸರ್ ಎಂ.ವಿಶ್ವೇಶಶ್ವರಯ್ಯ ಸ್ನಾತಕೋತ್ತರ ಕೇಂದ್ರವನ್ನು ಸ್ಥಾಪಿಸಲಾಗಿತ್ತು. ದಿನಾಂಕ : 15-10-1996 ರಂದು ಅದನ್ನು ತೂಬಿನಕೆರೆ ಬಳಿಯ ಸ್ವಂತ ಕಟ್ಟಡಕ್ಕೆ ಸ್ಥಳಾಂತರಿಸಲಾಗಿದೆ.